ಕೊಡುತ್ತಾರೆಂದರೆ ಅಲ್ಲೂ ಅಸಮಾನತೆ ಇದೆ. ಆದ್ದರಿಂದ ಇದನ್ನು ಗಂಭೀರವಾಗಿ ಪರಿಗಣಿಸಿ ಮಾನ್ಯ ಮುಖ್ಯಮಂತ್ರಿಯವರು ಉತ್ತರವನ್ನು ಕೊಡುವಾಗ ನಮ್ಮ ಎಲ್ಲಾ ಪ್ರಶ್ನೆಗಳಿಗೆ, ನಮ್ಮ ಸಮಸ್ಯೆಗಳನ್ನು ಪರಿಹಾರ ಮಾಡುವ ನಿಟ್ಟಿನಲ್ಲಿ ತಾವೂ ವಿಶೇಷವಾದ ಪ್ರಯತ್ನ ಮಾಡಬೇಕೆಂದು ತಮ್ಮಲ್ಲಿ ವಿನಂತಿ ಮಾಡಿ ತಾವು ನನಗೆ ಮಾತನಾಡಲು ಅವಕಾಶ ಕೊಟ್ಟಿದ್ದಕ್ಕೆ ವಂದಿಸಿ ನನ್ನ ಮಾತನ್ನು ಮುಗಿಸುತ್ತೇನೆ.

ಅಧ್ಯಕ್ಷರು: ಆಯವ್ಯಯದ ಮೇಲಿನ ಚರ್ಚೆಯನ್ನು ನಾಳೆಗೆ ಮುಂದುವರೆಸೋಣ. ಈಗ ಶಾಸನ ರಚನೆ. ವಿಧೇಯಕಗಳನ್ನು ಹಿಂದಕ್ಕೆ ಪಡೆಯುವುದು.

ಶಾಸನ ರಚನೆ

ವಿಧೇಯಕವನ್ನು ಹಿಂದಕ್ಕೆ ಪಡೆಯುವುದು

ಭೂಸ್ವಾಧೀನ (ಕರ್ನಾಟಕ ತಿದ್ದುಪಡಿ) ವಿಧೇಯಕ, 2009

ಹಿಂದಕ್ಕೆ ಪಡೆಯಲು ಅನುಮತಿ ಕೋರಿಕೆ

ಶ್ರೀ ಎಸ್. ಸುರೇಶ್‌ಕುಮಾರ್ (ಕಾನೂನು ಮತ್ತು ಸಂಸದೀಯ ಸಚಿವರು) (ಕಂದಾಯ ಸಚಿವರ ಪರವಾಗಿ):– ಮಾನ್ಯ ಅಧ್ಯಕ್ಷರೆ, **2009ರ ಭೂಸ್ವಾಧೀನ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು** ಹಿಂದಕ್ಕೆ ಪಡೆಯಲು ಅನುಮತಿ ನೀಡಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವನೆ ಮಂಡಿಸಲಾಯಿತು.

ಶ್ರೀ ಎಸ್. ಸುರೇಶ್‌ಕುಮಾರ್ (ಕಾನೂನು ಮತ್ತು ಸಂಸದೀಯ ಸಚಿವರು): ಬೆಳಗಾವಿ ಅಧಿವೇಶನದಲ್ಲಿ ಈ ವಿಧೇಯಕವನ್ನು introduce ಮಾಡಿದ್ದೆವು. ಈ ವಿಧೇಯಕದ ಪ್ರಕಾರ final notification ಕೊಡುವ ಹಕ್ಕನ್ನು ಜಿಲ್ಲಾಧಿಕಾರಿಯವರಿಗೆ ಕೊಡಬೇಕು ಎನ್ನುವುದು ಈ ವಿಧೇಯಕದ ಬಹಳ ಪ್ರಮುಖವಾದ ಅಂಶವಾಗಿತ್ತು. ಅನಂತರ ಕಳೆದ ವರ್ಷ ಬಜೆಟ್‌ನಲ್ಲಿ ಭಾಷಣ ಮಾಡುವಾಗ ಮಾನ್ಯ ಮುಖ್ಯಮಂತ್ರಿಯವರು final notification ಕೊಡುವ ಅಧಿಕಾರವನ್ನು ಪ್ರಾದೇಶಿಕ ಆಯುಕ್ತರುಗಳು ಏನಿದ್ದಾರೆ ಅವರಿಗೆ ಕೊಡಬೇಕೆಂದು ತೀರ್ಮಾನ ತೆಗೆದುಕೊಂಡಿದ್ದೇವೆ. ಆದ್ದರಿಂದ ಮತ್ತೆ ತಿದ್ದುಪಡಿಯೊಂದಿಗೆ ಪ್ರಾದೇಶಿಕ ಆಯುಕ್ತರು ಎಂದು ಮಂಡಿಸುತ್ತೇವೆ.

ಅಧ್ಯಕ್ಷರು: ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವನೆ ಹೀಗಿದೆ:

2009ನೇ ಸಾಲಿನ ಭೂಸ್ವಾಧೀನ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಹಿಂದಕ್ಕೆ ಪಡೆಯಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ. ವಿಧೇಯಕವನ್ನು ಹಿಂದಕ್ಕೆ ಪಡೆಯಲಾಗಿದೆ.

ವಿಧೇಯಕವನ್ನು ಮಂಡಿಸುವುದು

ಕಾರ್ಖಾನೆಗಳ (ಕರ್ನಾಟಕ ತಿದ್ದುಪಡಿ) ವಿಧೇಯಕ, 2011

ಶ್ರೀ ಬಿ.ಎನ್. ಬಚ್ಚೇಗೌಡ (ಕಾರ್ಮಿಕ ಸಚಿವರು): ಮಾನ್ಯ ಅಧ್ಯಕ್ಷರೆ, **2011ರ ಕಾರ್ಖಾನೆಗಳ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು** ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವನೆ ಮಂಡಿಸಲಾಯಿತು. ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವನೆ ಹೀಗಿದೆ: **2011ನೇ ಸಾಲಿನ ಕಾರ್ಖಾನೆಗಳ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು** ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

ಶ್ರೀ ಬಿ.ಎನ್. ಬಚ್ಚೇಗೌಡ (ಕಾರ್ಮಿಕ ಸಚಿವರು): ಮಾನ್ಯ ಅಧ್ಯಕ್ಷರೆ, **ಕಾರ್ಖಾನೆಗಳ (ಕರ್ನಾಟಕ ತಿದ್ದುಪಡಿ) ವಿಧೇಯಕ, 2011ನ್ನು** ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.